ಕರ್ನಾಟಕ ಸರ್ಕಾರ

ವಿಕಲಚೇತನರ ಹಾಗೂ ಹಿರಿಯನಾಗರಿಕರ ಸಬಲೀಕರಣ ಇಲಾಖೆ, ಬೆಳಗಾವಿ ಜಿಲ್ಲೆ

ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಕಛೇರಿ, ಬೆಳಗಾವಿ

**Email: ddwobelagavi@gmail.com** ದೂರವಾಣಿ :0831-2476096

---

ಸಂ: ವಿಹಿನಾಸಇ/ಜಿಅಂಕಬೆ/ನಶಾಮುಕ್ತಭಾರತ/ಪ್ರತಿಜ್ಞಾ.ಕಾ./2025-26 284 ದಿನಾಂಕ:31-07-2025.

ಗೆ,

1) ಮಾನ್ಯ ಕುಲಸಚಿವರು
ವಿಶ್ವೇಶ್ವರಯ್ಯಾ ತಾಂತ್ರಿಕ ಮಹಾವಿದ್ಯಾಲಯ, ಬೆಳಗಾವಿ.
2) ಮಾನ್ಯ ಕುಲಸಚಿವರು
ರಾಣಿ ಚನ್ನಮ್ಮಾ ವಿಶ್ವವಿದ್ಯಾಲಯ, ಬೆಳಗಾವಿ.
3) ಮಾನ್ಯ ಕುಲಸಚಿವರು
ಕೆ.ಎಲ್.ಇ. ಮಹಾವಿದ್ಯಾಲಯ, ಬೆಳಗಾವಿ.
4) ಮಾನ್ಯ ನಿರ್ದೇಶಕರು,
ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ (ಬಿಮ್ಸ್) ಬೆಳಗಾವಿ.
5) ಉಪನಿರ್ದೇಶಕರು,
ಪದವಿ ಪೂರ್ವ ಕಾಲೇಜು ಶಿಕ್ಷಣ ಇಲಾಖೆ
ಬೆಳಗಾವಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ.
6) ಉಪನಿರ್ದೇಶಕರು
ಶಾಲಾ ಶಿಕ್ಷಣ ಇಲಾಖೆ
ಬೆಳಗಾವಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ.

ಮಾನ್ಯರೇ,

**ವಿಷಯ : "ನಶಾಮುಕ್ತ ಭಾರತ ಅಭಿಯಾನದಡಿ" ಎಲ್ಲಾ ಶಾಲೆಗಳು, ಕಾಲೇಜುಗಳು, ಮಹಾವಿದ್ಯಾಲಯಗಳು, ತಾಂತ್ರಿಕ ಮತ್ತು ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞೆ ಸ್ವೀಕರಿಸುವ ಬಗ್ಗೆ.**

**ಉಲ್ಲೇಖ : ಕೇಂದ್ರ ಸರ್ಕಾರದ ಅರೆ ಸರ್ಕಾರಿ ಪತ್ರ ಸಂಖ್ಯೆ: DP-5/7/2025-DP-III, ದಿನಾಂಕ: 29-07-2025.**

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದನ್ವಯ "ನಶಾಮುಕ್ತ ಭಾರತ ಅಭಿಯಾನ" ಪ್ರಾರಂಭವಾಗಿ 5 ವರ್ಷ ಅವಧಿ ಪೂರ್ಣಗೊಂಡಿರುವುದರಿಂದ "ನಶಾಮುಕ್ತ ಭಾರತ ಅಭಿಯಾನ" ಯೋಜನೆಯಡಿ ದಿನಾಂಕ: 01-08-2025 ರಿಂದ 31-08-2025 ರವರೆಗೆ ಎಲ್ಲಾ ಶಾಲಾ/ಕಾಲೇಜುಗಳು ವಿದ್ಯಾರ್ಥಿಗಳು, ಯುವಕರು, ಮಹಿಳೆಯರು, ಉದ್ಯೋಗಿಗಗಳು ಮತ್ತು ಸಾರ್ವಜನಿಕರಿಗಾಗಿ ಆನ್‌ಲೈನ್ ಮೂಲಕ ಪ್ರತಿಜ್ಞೆ ಸ್ವೀಕರಿಸುವ ಕ್ಯಾಂಪೇನ್ ಆಚರಿಸುವುದರೊಂದಿಗೆ ತಮ್ಮ ವ್ಯಾಪ್ತಿಯ ಎಲ್ಲಾ ಶಾಲಾ ಕಾಲೇಜುಗಳು ಮಹಾವಿದ್ಯಾಲಯಗಳು, ತಾಂತ್ರಿಕ ಮತ್ತು ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಹಾಗೂ ಕಾರ್ಯಕ್ರಮ ಏರ್ಪಡಿಸಿರುವ ಬಗ್ಗೆ ಭಾವಚಿತ್ರದೊಂದಿಗೆ ನಶಾಮುಕ್ತ ಭಾರತ ಅಭಿಯಾನ್ ಪೋರ್ಟಲ್‌ನಲ್ಲಿ ಮತ್ತು ಅಪ್ಲಿ (App) ಕೇಷನ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಕಾರಣ ತಮ್ಮ ವ್ಯಾಪ್ತಿಗೊಳಪಡುವ ಶಾಲಾ ಕಾಲೇಜುಗಳಲ್ಲಿ ಕಾರ್ಯಕ್ರಮವನ್ನು ಈ ಕೆಳಕಾಣಿಸಿದ ವಿಷಯಗಳನ್ನೊಂಡು ಏರ್ಪಡಿಸಲು ಕ್ರಮ ವಹಿಸುವಂತೆ ಹಾಗೂ ಕಾರ್ಯಕ್ರಮ ಏರ್ಪಡಿಸಿದ ವರದಿಯನ್ನು ಭಾವಚಿತ್ರದೊಂದಿಗೆ ನಶಾಮುಕ್ತ ಭಾರತ ಅಭಿಯಾನ್ ಪೋರ್ಟಲ್‌ನಲ್ಲಿ ಮತ್ತು ಅಪ್ಲಿ (App) ಕೇಷನ್‌ನಲ್ಲಿ ಅಪ್‌ಲೋಡ್ ಮಾಡಲು ಹಾಗೂ ಈ ಕಛೇರಿ ಇ-ಮೇಲ್: **ddwobelagavi@gmail.com** ಗೆ ಮಾಹಿತಿಯನ್ನು ಸಲ್ಲಿಸಲು ಕೋರಲಾಗಿದೆ.

1) ದಿನಾಂಕ:13-08-2025 ರ ಬೆಳಿಗ್ಗೆ 9-00 ಗಂಟೆಗೆ ಎಲ್ಲಾ ಶಾಲೆಗಳು, ಕಾಲೇಜುಗಳು. ಮಹಾವಿದ್ಯಾಲಯಗಳು, ತಾಂತ್ರಿಕ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಐಐಟಿಎಸ್, ಐಐಎಂಎಸ್, ಪಾಲಿಟೆಕ್ನಿಕ್ ಕಾಲೇಜುಗಳು, ಫ್ಯಾಷನ್ ಇನ್‌ಸ್ಟಿಟ್ಯೂಟ್ ಮತ್ತು ಸಾರ್ವಜನಿಕ ಸಂಸ್ಥೆಗಳಲ್ಲಿ ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞೆ ಸ್ವೀಕರಿಸುವುದು.

2) ಶೈಕ್ಷಣಿಕ ಸಂಸ್ಥೆಗಳಲ್ಲಿ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು, ಮಾದಕ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ವಿಚಾರಗೋಷ್ಠಿ ಮತ್ತು ಕಾರ್ಯಾಗಾರಗಳನ್ನು ಮತ್ತು ವಿದ್ಯಾರ್ಥಿಗಳ ರ್‍ಯಾಲಿ ಮ್ಯಾರಾಥಾನ್, ಬೀದಿ ನಾಟಕಗಳನ್ನು ಆಯೋಜಿಸುವುದು.

3) ಶಾಲಾ ಕಾಲೇಜು ಆವರಣಗಳಲ್ಲಿ ನಶಾಮುಕ್ತ ಭಾರತ ಅಭಿಯಾನದ ನೆನಪಿನ ಪ್ರಯುಕ್ತ ಒಂದು ಸಸಿಯನ್ನು ನೆಡುವುದು.

ಮೇಲೆ ತಿಳಿಸಿರುವಂತೆ ನಶಾಮುಕ್ತ ಭಾರತ ಅಭಿಯಾನದ ಎಲ್ಲಾ ಕಾರ್ಯಕ್ರಮಗಳನ್ನು ಆಯೋಜಿಸಲು ಸಂಬಂಧಪಟ್ಟ ಎಲ್ಲಾ ಶಾಲಾ ಕಾಲೇಜುಗಳ ಮುಖ್ಯಸ್ಥರಿಗೆ ಸೂಚನೆ ನೀಡುವುದರ ಮೂಲಕ ಕೇಂದ್ರ ಸರ್ಕಾರದ ನಶಾಮುಕ್ತ ಭಾರತ ಅಭಿಯಾನ ಯೋಜನೆಯನ್ನು ಯಶಸ್ವಿಗೊಳಿಸಲು ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ
-ಸಹಿ-
ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು
ಬೆಳಗಾವಿ.

ಪ್ರತಿಯನ್ನು :

1) ಮಾನ್ಯ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ರವರ ಗೌರವಪೂರ್ವಕ ಮಾಹಿತಿಗಾಗಿ ಸಲ್ಲಿಸಿದೆ.
2) ಮಾನ್ಯ ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ ಬೆಳಗಾವಿ ರವರ ಗೌರವಪೂರ್ವಕ ಮಾಹಿತಿಗಾಗಿ ಸಲ್ಲಿಸಿದೆ.

31/07/25

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು
ಬೆಳಗಾವಿ.